# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಬಲ್ಕೀಸ್ ಬಾನು ರವರ ನಿಯಮ330 ರ ಪ್ರಶ್ನೆಗೆ ಉತ್ತರ.

**ಪ್ರಶ್ನೆ: -**

ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರಡಿ ಹೊಸದಾಗಿ ಕೊಳಚೆ ಪ್ರದೇಶಗಳೆಂದು ಬೆಂಗಳೂರು ನಗರ, ಬೆಳಗಾವಿ, ಚಿಕ್ಕಬಳ್ಳಾಪುರ, ಧಾರವಾಡ, ಹಾವೇರಿ, ಶಿವಮೊಗ್ಗ, ತುಮಕೂರು ಮತ್ತು ವಿಜಯಪುರ ಜಿಲ್ಲೆಗಳನ್ನು ಘೋಷಿಸಲಾಗಿದ್ದು, ಸದರಿ ಜಿಲ್ಲೆಗಳಲ್ಲಿ ಅಭಿವೃದ್ಧಿ ಪಡಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ

**ಉತ್ತರ : -**

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973 ರಡಿ ಬೆಂಗಳೂರು ನಗರ, ಬೆಳಗಾವಿ, ಚಿಕ್ಕಬಳ್ಳಾಪುರ, ಧಾರವಾಡ, ಹಾವೇರಿ, ಶಿವಮೊಗ್ಗ, ತುಮಕೂರು ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಹೊಸದಾಗಿ ಒಟ್ಟಾರೆ 28 ಕೊಳಚೆ ಪ್ರದೇಶಗಳು ಘೋಷಣೆಯಾಗಿವೆ (ವಿವರಗಳನ್ನು ಅನುಬಂಧ-ಅ ರಲ್ಲಿ ನೀಡಲಾಗಿದೆ).

**ಮೂಲಭೂತ ಸೌಲಭ್ಯ :-**

ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯು ರಾಜ್ಯಾದ್ಯಂತ ಬರುವ ಕೊಳಗೇರಿ ಪ್ರದೇಶಗಳನ್ನು ಗುರುತಿಸಿ, ಮಂಡಳಿಯ ಕಾಯ್ದೆಯಡಿ ಘೋಷಣೆ ಹೊರಡಿಸಿ, ತದನಂತರ ಘೋಷಿತ ಕೊಳಗೇರಿ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ಕುಡಿಯುವ ನೀರು, ಬೀದಿ ದೀಪ, ಇತ್ಯಾದಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಯವ್ಯಯದಲ್ಲಿ ಕೊಳಗೇರಿ ಸುಧಾರಣೆ ಯೋಜನೆಯಡಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಕ್ರಿಯಾ ಯೋಜನೆ ತಯಾರಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದ ನಂತರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.

ಅದರಂತೆ, 2025-26ನೇ ಸಾಲಿನಲ್ಲಿ ಕೊಳಗೇರಿ ಸುಧಾರಣೆ ಯೋಜನೆಯಡಿ ಮೇಲ್ಕಂಡ ಜಿಲ್ಲೆಗಳಲ್ಲಿ ಹೊಸದಾಗಿ ಘೋಷಿಸಲಾದ ಕೊಳಗೇರಿ ಪ್ರದೇಶಗಳ ಪೈಕಿ ಆಯವ್ಯಯದಲ್ಲಿ ಒದಗಿಸಿರುವ ಅನುದಾನಕ್ಕೆ ಅನುಗುಣವಾಗಿ ಮೂಲಭೂತ ಸೌಲಭ್ಯ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಈ ಕೆಳಕಂಡಂತೆ ನಿರ್ವಹಿಸಲಾಗಿರುತ್ತದೆ.

1. ಧಾರವಾಡ ಜಿಲ್ಲೆಯ ಹುಬ್ಬಳ್ಳಿ –ಧಾರವಾಡ ಪೂರ್ವ ವಿಧಾನ ಸಭಾ ಕ್ಷೇತ್ರದ ಜನ್ನತ್ ಭಾಗ-2 ಕೊಳಚೆ ಪ್ರದೇಶದಲ್ಲಿ ರೂ.92.00ಲಕ್ಷಗಳಲ್ಲಿ ಒಳಚರಂಡಿ, ಕೊಳವೆ ಮಾರ್ಗ, ಸಿಸಿ. ಚರಂಡಿ, ಸಿ.ಸಿ.ರಸ್ತೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.
2. ಧಾರವಾಡ ಜಿಲ್ಲೆಯ ಹುಬ್ಬಳ್ಳಿ –ಧಾರವಾಡ ಪೂರ್ವ ವಿಧಾನ ಸಭಾ ಕ್ಷೇತ್ರದ ವಡ್ಡರ ಓಣಿ ಕೊಳಚೆ ಪ್ರದೇಶದಲ್ಲಿ ರೂ.135.00ಲಕ್ಷಗಳಲ್ಲಿ ಪೇವರ್ಸ್ ಮತ್ತು ಮೂಲಭೂತ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.
3. ತುಮಕೂರು ಜಿಲ್ಲೆಯ ಕುಣಿಗಲ್ ವಿಧಾನ ಸಭಾ ಕ್ಷೇತ್ರದ ಮಳ್ಳೆಪಾಳ್ಯ ಮತ್ತು ಮಲ್ಲಘಟ್ಟ ಕೊಳಚೆ ಪ್ರದೇಶಗಳಲ್ಲಿ ರೂ. 100.00 ಲಕ್ಷಗಳಲ್ಲಿ ಸಿ.ಸಿ. ರಸ್ತೆ ಮತ್ತು ಆರ್.ಸಿ.ಸಿ.ಡ್ರೈನ್ ಮತ್ತು ಡೆಕ್ಸ್ಲಾಬ್ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.

ಕೊಳಗೇರಿ ಪ್ರದೇಶಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಕಚ್ಚಾ-ಸೆಮಿಪಕ್ಕ / ಗುಡಿಸಲುಗಳಲ್ಲಿ ವಾಸಿಸುತ್ತಿರುವ ಕೊಳಗೇರಿ ನಿವಾಸಿಗಳಿಗೆ in-situ / Re-location ಮಾದರಿಯಲ್ಲಿ ಬೇಡಿಕೆಗೆ ಅನುಗುಣವಾಗಿ ಗುರಿಗಳನ್ನು ನಿಗದಿಪಡಿಸಿಕೊಂಡು ಯೋಜನಾ ವರದಿ ತಯಾರಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ನಿಯಮಾನುಸಾರ ಮನೆಗಳನ್ನು ನಿರ್ಮಿಸಿ ಫಲಾನುಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡಲಾಗುವುದು.

ಸಂಖ್ಯೆ:ವಇ 61 ಎಸ್‌ಬಿಎಂ 2026

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ ಸಚಿವರು